# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾಮಾಜಿಕ ಭದ್ರತಾ ಯೋಜನೆಯಡಿ ಸಂಧ್ಯಾ ಸುರಕ್ಷಾ ಯೋಜನೆ ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಗಳಡಿ ನೀಡಲಾಗುತ್ತಿರುವ ಮಾಸಾಶನವನ್ನು ಹೆಚ್ಚಿಸುವ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ ಆರ್‌ಡಿ 47 ಡಿಎಸ್‌ಪಿ 2018, ದಿನಾಂಕ 18.03.2018
2. 2018-19 (ಜುಲೈ) ನೇ ಸಾಲಿನ ಪರಿಷ್ಕೃತ ಬಜೆಟ್ ಘೋಷಣೆ.

*********

**ಪ್ರಸ್ತಾವನೆ:**

ಸರ್ಕಾರವು ಅಸಹಾಯಕ ವೃದ್ಧರಿಗೆ ಹಾಗೂ ಹಿರಿಯ ನಾಗರೀಕರಿಗೆ ಸಾಮಾಜಿಕ ಭದ್ರತೆ ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನವನ್ನು ಅರ್ಹ ಫಲಾನುಭವಿಗಳಿಗೆ ನೀಡುತ್ತಿರುತ್ತದೆ.

ಮೇಲೆ ಓದಲಾದ ಉಲ್ಲೇಖಿತ ಸರ್ಕಾರಿ ಆದೇಶದನ್ವಯ ಸಂಧ್ಯಾ ಸುರಕ್ಷಾ ಯೋಜನೆಗಳಡಿ 65 ವರ್ಷ ಮೇಲ್ಪಟ್ಟ ಅರ್ಹ ಫಲಾನುಭವಿಗಳಿಗೆ ರೂ. 600 ಮಾಸಾಶನವನ್ನು ನೀಡಲಾಗುತ್ತಿದೆ. ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ 60 ರಿಂದ 80 ವರ್ಷದೊಳಗಿನ ಫಲಾನುಭವಿಗಳಿಗೆ ರೂ. 600 ಮಾಸಾಶನ ನೀಡಲಾಗುತ್ತಿದೆ.

2018-19 (ಜುಲೈ) ನೇ ಸಾಲಿನ ಪರಿಷ್ಕೃತ ಬಜೆಟ್‌ನಲ್ಲಿ ಮಾನ್ಯ ಮುಖ್ಯ ಮಂತ್ರಿಗಳು ಕಂದಾಯ ಇಲಾಖೆಯಡಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

"ಹಿರಿಯ ನಾಗರೀಕರ ಕಲ್ಯಾಣಕ್ಕಾಗಿ ನಮ್ಮ ಸರ್ಕಾರವು ಬದ್ಧವಾಗಿದೆ. ಬಡಜನರು ವೃದ್ಧಾಪ್ಯದಲ್ಲಿ ತೊಂದರೆ ಅನುಭವಿಸಬಾರದು ಎನ್ನುವುದು ನಮ್ಮ ಆಶಯವಾಗಿದೆ. ಈ ನಿಟ್ಟಿನಲ್ಲಿ ಪ್ರಸ್ತುತ ಸಂಧ್ಯಾ ಸುರಕ್ಷಾ ಯೋಜನೆಯಡಿಯಲ್ಲಿ ಫಲಾನುಭವಿಗಳು ಪಡೆಯುತ್ತಿರುವ 600 ರೂ.ಗಳ ಮಾಸಾಶನವನ್ನು 1000 ರೂ.ಗಳಿಗೆ ಹೆಚ್ಚಿಸಿ, 1ನೇ ನವೆಂಬರ್ 2018 ರಿಂದ ಜಾರಿಗೊಳಿಸಲಾಗುವುದು. ಇದರಿಂದಾಗಿ 65 ವರ್ಷ ಮೀರಿದ 32.92 ಲಕ್ಷ ವೃದ್ಧರು ಆರ್ಥಿಕ ಪ್ರಯೋಜನ ಪಡೆಯಲಿದ್ದಾರೆ. ಈ ಮೊತ್ತವನ್ನು ಮುಂದಿನ 5 ವರ್ಷಗಳಲ್ಲಿ ಹಂತಹಂತವಾಗಿ ಹೆಚ್ಚಿಸಲಾಗುವುದು. ಈ ಉದ್ದೇಶಕ್ಕಾಗಿ ಈ ಸಾಲಿನ ಆಯವ್ಯಯದಲ್ಲಿ ಹೆಚ್ಚುವರಿಯಾಗಿ 660 ಕೋಟಿ ರೂ.ಗಳನ್ನು ಒದಗಿಸಲಾಗುವುದು".

ಈ ಹಿನ್ನೆಲೆಯಲ್ಲಿ ಸಂಧ್ಯಾ ಸುರಕ್ಷಾ ಯೋಜನೆ ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಗಳಡಿ ನೀಡಲಾಗುತ್ತಿರುವ ಮಾಸಾಶನದ ಮೊತ್ತವನ್ನು ಹೆಚ್ಚಿಸಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ:

## ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 47 ಡಿಎಸ್‌ಪಿ 2018, ಬೆಂಗಳೂರು ದಿನಾಂಕ:14.09.2018

ಸಂಧ್ಯಾ ಸುರಕ್ಷಾ ಯೋಜನೆ ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಗಳಡಿ 65 ವರ್ಷ ಮೇಲ್ಪಟ್ಟ ಅರ್ಹ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನವನ್ನು ರೂ.600/- ಗಳಿಂದ ರೂ.1000/- ಗಳಿಗೆ ಹೆಚ್ಚಿಸಿ ದಿನಾಂಕ:01.11.2018 ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಸಾಮಾಜಿಕ ಭದ್ರತಾ ಯೋಜನೆಗಳಾದ ಸಂಧ್ಯಾ ಸುರಕ್ಷಾ ಯೋಜನೆ ಹಾಗೂ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಗಳಡಿ ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಈ ಆದೇಶದಂತೆ ಹೆಚ್ಚಿಸಿರುವ ಮಾಸಾಶನ

ಮೊತ್ತವನ್ನು ವಿತರಿಸಲು ನಿರ್ದೇಶಕರು, ಖಜಾನೆ ನಿರ್ದೇಶನಾಲಯ ಹಾಗೂ ಜಿಲ್ಲಾ ಖಜಾನಾಧಿಕಾರಿಗಳು/ಉಪ ಖಜಾನಾಧಿಕಾರಿಗಳು ಇವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮುಂದುವರೆದು, ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಯಡಿ 60 ರಿಂದ 64 ವರ್ಷ ವಯಸ್ಸಿನ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನ ಮೊತ್ತವನ್ನು ರೂ.600 ರಂತೆಯೇ ಮುಂದುವರೆಸಲು ಆದೇಶಿಸಿದೆ.

ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 627 ವೆಚ್ಚ-7/2018 ದಿನಾಂಕ:25.08.2018ರಲ್ಲಿ ನೀಡಿದ ಸಹಮತಿಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ. ನಾರಾಯಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ,
(ವಿ.ನಿ. ಹಾಗೂ ನೋಂ ಮತ್ತು ಮು)

ಇವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು ಇವರಿಗೆ- ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, 5ನೇ ಮಹಡಿ, ಕಂದಾಯ ಭವನ, ಬೆಂಗಳೂರು ಇಲ್ಲಿಗೆ ಕಳುಹಿಸಬೇಕೆಂದು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು(ಆಯವ್ಯಯ ಮತ್ತು ಸಂಪನ್ಮೂಲ), ವಿಧಾನಸೌಧ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಮಾನ್ಯ ಕಂದಾಯ ಸಚಿವರ ವಿಶೇಷ ಕರ್ತವ್ಯಾಧಿಕಾರಿ, ವಿಧಾನಸೌಧ, ಬೆಂಗಳೂರು.
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-7), ವಿಧಾನಸೌಧ, ಬೆಂಗಳೂರು.
13. ಎಲ್ಲಾ ಉಪ ವಿಭಾಗಾಧಿಕಾರಿಗಳು / ಎಲ್ಲಾ ತಹಶೀಲ್ದಾರರುಗಳಿಗೆ.
14. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
15. ಶಾಖಾ ರಕ್ಷಾ ಕಡತ ಮತ್ತು ಹೆಚ್ಚುವರಿ ಪ್ರತಿ.